## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಮತ್ತು ಕಾರ್ಯದರ್ಶಿ(ಪಂ.ರಾಜ್), ಇವರುಗಳ ನಡುವೆ ಕಾರ್ಯಹಂಚಿಕೆಯನ್ನು ಮರುಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 320 ಪಬವ 2012 ದಿನಾಂಕ: 19-11-2012.

------

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ನಿರ್ವಹಿಸುತ್ತಿರುವ ವಿಷಯಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಮತ್ತು ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಇವರುಗಳಿಗೆ ಮೇಲೆ ಓದಲಾದ ದಿನಾಂಕ 19-11-2012 ರ ಆದೇಶದಲ್ಲಿ ಕಾರ್ಯಹಂಚಿಕೆ ಮಾಡಲಾಗಿದೆ. ಸದರಿ ಆದೇಶದ ಅನುಬಂಧ-1 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಇವರಿಗೆ ಹಂಚಿಕೆಯಾಗಿರುವ ವಿಷಯಗಳ ಪೈಕಿ ಕೆಲವು ವಿಷಯಗಳನ್ನು ಇಲಾಖೆಯ ಆಡಳಿತ ಹಿತದೃಷ್ಟಿಯಿಂದ ಕಾರ್ಯದರ್ಶಿ(ಪಂ.ರಾಜ್), ಇವರಿಗೆ ಮರುಹಂಚಿಕೆ ಮಾಡಲು ನಿರ್ಣಯಿಸಿ, ಈ ಮುಂದಿನಂತೆ ಆದೇಶಿಸಿದೆ.

***ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 198 ಪಬವ 2013 ದಿನಾಂಕ 01-6-2013***

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 320 ಪಬವ 2012 ದಿನಾಂಕ 19-11-2012 ರ ಅನುಬಂಧ-1 ರಲ್ಲಿ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಇವರಿಗೆ ಹಂಚಿಕೆಯಾಗಿರುವ ವಿಷಯಗಳ ಪೈಕಿ ಈ ಕೆಳಕಂಡ ವಿಷಯಗಳನ್ನು ಕಾರ್ಯದರ್ಶಿ(ಪಂ.ರಾಜ್), ಇವರಿಗೆ ಕೂಡಲೇ ಜಾರಿಗೆ ಬರುವಂತೆ ಮರುಹಂಚಿಕೆ ಮಾಡಲಾಗಿದೆ.

1) ಸ್ವ-ಉದ್ಯೋಗ ಕಾರ್ಯಕ್ರಮಗಳಿಗೆ ಸಂಬಂಧಿಸಿದ ವಿಷಯಗಳು
2) ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ಸಂಬಂಧಿಸಿದ ವಿಷಯಗಳು
3) ನ್ಯಾಷನಲ್ ರೂರಲ್ ಲೈವ್ಲಿಹುಡ್ ಮಿಷನ್‌ಗೆ ಸಂಬಂಧಿಸಿದ ವಿಷಯಗಳು
4) ಇ-ಆಡಳಿತ (ಎಂ.ಇ.ಎಸ್.) ಗೆ ಸಂಬಂಧಿಸಿದ ವಿಷಯಗಳು
5) ನಿರ್ಮಲ ಭಾರತ ಅಭಿಯಾನಕ್ಕೆ ಸಂಬಂಧಿಸಿದ ವಿಷಯಗಳು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಬಿ.ರಘುನಾಥ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
3. ನಿರ್ದೇಶಕರು, ರಾಜ್ಯ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
4. ಮಿಷನ್ ಡೈರೆಕ್ಟರ್, ಕೆ.ಎಸ್. ಆರ್.ಎಲ್.ಪಿ.ಎಸ್., ಬೆಂಗಳೂರು.
5. ಎಲ್ಲಾ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಸರ್ಕಾರದ ಅಪರ ಕಾರ್ಯದರ್ಶಿ(ಆಡಳಿತ) / ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಮುಖ್ಯಸ್ಥರು, ಗ್ರಾಮ ಸ್ವರಾಜ್, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
10. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಅಧೀನ ಕಾರ್ಯದರ್ಶಿಗಳು.
11. ಸಂಪಾದಕರು, ಕರ್ನಾಟಕ ವಿಕಾಸ,ಬೆಂಗಳೂರು.
12. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಎಲ್ಲಾ ಶಾಖಾಧಿಕಾರಿಗಳು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
14. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ- ಇಲಾಖೆಯ ವೆಬ್‌ಸೈಟ್ ಪ್ರಕಟಣೆಗಾಗಿ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.